**ದಿನಾಂಕ: 06-08-2022 ರಂದು 10-00 ಗಂಟೆಗೆ ಡಾ. ಸುರೇಶ್, ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ವಾರ್ಡ್-179 (ಶಾಖಾಂಬರಿನಗರ) ನಡೆದ ಸಭೆಯ ನಡಾವಳಿಗಳು:**

## : ಚರ್ಚೆಯಾದ ವಿಷಯಗಳು :

1. ವಾಡ್-179ರಲ್ಲಿನ ಸಾರ್ವಜನಿಕರ ಎಲ್ಲಾ ರೀತಿಯ ಕುಂದುಕೊರತೆಗಳ ಬಗ್ಗೆ ರಸ್ತೆ ಕಾಮಗಾರಿಗಳ ಬಗ್ಗೆ ಚರ್ಚಿಸುವ ಕುರಿತು.
2. ಅಧ್ಯಕ್ಷರ ಅಪ್ಪಣೆಯ ಮೇರೆಗೆ ಚರ್ಚಿಸುವಂತಹ ಇತರೆ ವಿಷಯಗಳು.

## : ಸಭೆಗೆ ಹಾಜರಾಗಿದ್ದವರ ವಿವರಗಳು :

| | |
|---|---|
| ಅಧ್ಯಕ್ಷರು | ನೋಡಲ್ ಅಧಿಕಾರಿ |
| ಸದಸ್ಯ ಕಾರ್ಯದರ್ಶಿ | ವಾರ್ಡ್ 179ರ ಸಹಾಯಕ ಅಭಿಯಂತರರು |
| ಸದಸ್ಯರುಗಳು | ಹಿರಿಯ /ಕಿರಿಯ ಆರೋಗ್ಯ ಪರಿವೀಕ್ಷಕರು |
| ಸದಸ್ಯರುಗಳು | ಜೆ.ಪಿ.ನಗರ ಬೆಸ್ಕಾಂ ಅಭಿಯಂತರರು |
| ಸದಸ್ಯರುಗಳು | ಬಿಡಬ್ಲ್ಯೂಎಸ್ಎಸ್‌ಬಿ ಅಭಿಯಂತರರು |
| ಸದಸ್ಯರುಗಳು | ಅರಣ್ಯ ಸಂರಕ್ಷಣಾಧಿಕಾರಿಗಳು |
| ಸದಸ್ಯರುಗಳು | ಬೀದಿ ದೀಪ ನಿರ್ವಹಣಾ ಅಭಿಯಂತರರು |
| ಸದಸ್ಯರುಗಳು | ಜೆ.ಪಿ.ನಗರ ಸಹಾಯಕ ಕಂದಾಯ ಅಧಿಕಾರಿಗಳು |
| ಸದಸ್ಯರುಗಳು | ರಸ್ತೆ ಮೂಲಭೂತ ಸೌಕರ್ಯ (ದಕ್ಷಿಣ) |
| ಸದಸ್ಯರುಗಳು | ಯೋಜನೆ (ದಕ್ಷಿಣ) |
| ಸದಸ್ಯರುಗಳು | ಠಾಣಾಧಿಕಾರಿಗಳು, ನ್ಯಾಯ ಮತ್ತು ಸುವ್ಯವಸ್ಥೆ ಹಾಗೂ ಸಂಚಾರಿ |
| ಸದಸ್ಯರುಗಳು | ಬೃಹತ್ ನೀರುಗಾಲುವೆ ಅಭಿಯಂತರರು |
| ಸದಸ್ಯರುಗಳು | ತೋಟಗಾರಿಕಾ ಅಧೀಕ್ಷಕರು (ದಕ್ಷಿಣ) |
| ಸದಸ್ಯರುಗಳು | ನಾಗರೀಕ ಕಲ್ಯಾಣ ಸಂಘ |

## :ನಡಾವಳಿಯ ವರದಿ:

- ಸದಸ್ಯ ಕಾರ್ಯದರ್ಶಿಗಳಾದ ಶ್ರೀ ಮನೋಹರ್ .ಡಿ, ಸಹಾಯಕ ಅಭಿಯಂತರರು ವಾರ್ಡ್ 179 ಶಾಖಾಂಬರಿನಗರ, ಜೆ.ಪಿ.ನಗರ ಉಪವಿಭಾಗ ರವರು ಮಾತನಾಡುತ್ತಾ, ಸಭೆಗೆ ಹಾಜರಾದ ವಾರ್ಡ್ ಸಮಿತಿಯ ಮಾನ್ಯ ಅಧ್ಯಕ್ಷರು, ಸದಸ್ಯರು ಹಾಗೂ ಪಾಲಿಕೆಯ ಮತ್ತು ಎಲ್ಲಾ ಇಲಾಖೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

**ಸದರಿ ಸಭೆಯಲ್ಲಿ ಕಸ ವಿಲೇವಾರಿ ಸಮಸ್ಯೆ ಹಾಗೂ ಇತರೇ ದೂರುಗಳ ಬಗ್ಗೆ ಕುರಿತು ಈ ಕೆಳಕಂಡಂತೆ ಪ್ರಸ್ತಾಪಿಸಲಾಯಿತು.**

- ವಾರ್ಡ್ ವ್ಯಾಪ್ತಿಯ ಹಲವು ಕಡೆಗಳಲ್ಲಿ ಕಸ ಸಂಗ್ರಹಣೆ ಮಾಡದೇ ಇರುವುದು ಕಂಡುಬಂದಿದ್ದು, ಅದನ್ನು ಆಗಿಂದಾಗ್ಗೆ ತೆರವುಗೊಳಿಸುವಂತೆ ಹಾಗೂ ಹೆಗ್ಗಣಗಳ ಕಾಟದಿಂದಾಗಿ ಮನೆಗಳಿಗೆ ನುಗ್ಗುತ್ತಿರುವುದಾಗಿ, 10ನೇ ಮುಖ್ಯರಸ್ತೆಯಲ್ಲಿ ಕಸಗಳನ್ನು ಸಂಗ್ರಹಣೆ ಮಾಡದೇ ಅಲ್ಲಿಯೇ ಬಿಟ್ಟು ಹೋಗುತ್ತಿರುವುದಾಗಿ ಇದನ್ನು ಕೂಡಲೇ ತೆರವುಗೊಳಿಸುವಂತೆ ಸಭೆಯಲ್ಲಿ ಚರ್ಚಿಸಲಾಯಿತು.

ಕ್ರಮ :- ಸ.ಕಾ.ನಿ.ಅ., ಎಸ್.ಡಬ್ಲ್ಯೂ.ಎಂ.

*ಮು.ತಿ.ನೋ.*

- ವಾರ್ಡ್ ವ್ಯಾಪ್ತಿಯಲ್ಲಿನ ಹಲವು ಚರಂಡಿ ಮೋರಿಗಳಲ್ಲಿ ಹೂಳೆತ್ತುವ ಕಾಮಗಾರಿಯನ್ನು ಕ್ರಮ ಕೈಗೊಳ್ಳುವ ಬಗ್ಗೆ ಚರ್ಚಿಸಲಾಗಿದ್ದು, ಸದರಿ ಸಹಾಯಕ ಅಭಿಯಂತರರು ಹೂಳೆತ್ತುವ ಕಾಮಗಾರಿಗೆ ಸಂಬಂಧಿಸಿದಂತೆ ಟೆಂಡರ್ ಆಹ್ವಾನಿಸಲಾಗಿದ್ದು, ಶೀಘ್ರದಲ್ಲಿ ಕ್ರಮ ಕೈಗೊಳ್ಳಲಾಗುವುದೆಂದು ಸಭೆಯಲ್ಲಿ ತಿಳಿಸಲಾಯಿತು.

ಕ್ರಮ :- ಸ.ಕಾ.ನಿ.ಅ., ಜೆ.ಪಿ.ನಗರ ಉಪ ವಿಭಾಗ

- ಜಾಲಪ್ಪ ಮೆಡಿಕಲ್ ಕಾಲೇಜಿನ ಬಸ್‌ಅನ್ನು 44ನೇ ಅಡ್ಡರಸ್ತೆ, 5ನೇ ಬಡಾವಣೆ ಜಯನಗರ ಇಲ್ಲಿ ವಾಹನವನ್ನು ನಿಲುಗಡೆ ಮಾಡುತ್ತಿದ್ದು, ಇದರಿಂದಾಗಿ ವಾಹನ ಸಂಚಾರಕ್ಕೆ ಹಾಗೂ ಸಾರ್ವಜನಿಕರಿಗೆ ಓಡಾಡಲು ತೊಂದರೆಯಾಗುತ್ತಿರುವುದಾಗಿ ಇದನ್ನು ಕೂಡಲೇ ತೆರವುಗೊಳಿಸುವಂತೆ ಸಭೆಯಲ್ಲಿ ಚರ್ಚಿಸಲಾಯಿತು.

ಕ್ರಮ :- ಜಯನಗರ ಸಂಚಾರಿ ಪೊಲೀಸ್ ಠಾಣೆ

- ವಾರ್ಡ್ ವ್ಯಾಪ್ತಿಯಲ್ಲಿನ 43ನೇ, 44ನೇ, 45ನೇ ಮತ್ತು 46ನೇ ಅಡ್ಡರಸ್ತೆಯ 8ನೇ ಬಡಾವಣೆಯಲ್ಲಿ ಪ್ರತಿನಿತ್ಯ ವಿದ್ಯುತ್ ವ್ಯತ್ಯಯವಾಗುತ್ತಿದ್ದು, ಇದರಿಂದಾಗಿ ಕೆಲಸ ಕಾರ್ಯಗಳಿಗೆ ತೊಂದರೆಯಾಗುತ್ತಿರುವ ಬಗ್ಗೆ ಚರ್ಚಿಸಲಾಯಿತು.

ಕ್ರಮ :- ಸ.ಕಾ.ನಿ.ಅ. ಬೆಸ್ಕಾಂ

- ಕೊನೆಯದಾಗಿ ಮಾನ್ಯ ಅಧ್ಯಕ್ಷರು ಸಭೆಗೆ ಹಾಜರಾದ ಎಲ್ಲಾ ಸದಸ್ಯರು ಮತ್ತು ಸಾರ್ವಜನಿಕರಿಗೆ ವಂದನೆಯನ್ನು ತಿಳಿಸುತ್ತಾ, ಇನ್ನು ಮುಂದೆ ಪ್ರತಿ ತಿಂಗಳು ಮೊದಲ ಶನಿವಾರ ಬೆಳಿಗ್ಗೆ 11.00 ಘಂಟೆಗೆ ಇದೇ ರೀತಿಯಾಗಿ ಮಾಸಿಕ ವಾರ್ಡ್ ಸಮಿತಿ ಸಭೆ ನಡೆಯುವುದಾಗಿ ತಿಳಿಸಿ ಮುಂದಿನ ಸಭೆಗಳಿಗೆ ಈ ವಾರ್ಡಿನ ವ್ಯಾಪ್ತಿಗೆ ಬರುವ ಎಲ್ಲಾ ಇಲಾಖೆಗಳ ಅಧಿಕಾರಿಗಳನ್ನು ಸದರಿ ಸಭೆಗೆ ಮಾಹಿತಿಗಳೊಂದಿಗೆ ಹಾಜರಾಗುವಂತೆ ಕೋರಿ ಪತ್ರ ಬರೆಯಲು ಸದಸ್ಯ ಕಾರ್ಯದರ್ಶಿ ರವರಿಗೆ ಸೂಚಿಸಿದರು.

- ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, (ಜೆ.ಪಿ.ನಗರ) ಉಪವಿಭಾಗದ ಶ್ರೀ ಮನೋಹರ್ ಡಿ. ಸಹಾಯಕ ಇಂಜಿನಿಯರ್ ವಾರ್ಡ್ 179 ಶಾಖಾಂಬರಿನಗರ, ಸಭೆಗೆ ಹಾಜರಾದ ಎಲ್ಲಾ ಸದಸ್ಯರಿಗೂ ಹಾಗೂ ಅಧಿಕಾರಿಗಳು/ನೌಕರರಿಗೂ ವಂದನಾರ್ಪಣೆ ಸಲ್ಲಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ ಹಾಗೂ
ಸಹಾಯಕ ಅಭಿಯಂತರರು ವಾರ್ಡ್ 179
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ